# ಕರ್ನಾಟಕ ವಿಧಾನ ಪರಿಷತ್ತು

**ಸದಸ್ಯರ ಹೆಸರು** : **ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **549**

**ಉತ್ತರಿಸಬೇಕಾದ ದಿನಾಂಕ:** : **14.08.2025**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಯಾವ ಯಾವ ಆನ್-ಲೈನ್ ಗೇಮ್ಸ್ ಮತ್ತು ಆನ್-ಲೈನ್ ಜೂಜುಗಳಿಗೆ ಕಾನೂನಾತ್ಮಕ ಅವಕಾಶ ನೀಡಲಾಗಿದೆ; | ಯಾವುದೇ ಆನ್-ಲೈನ್ ಗೇಮ್ಸ್ ಮತ್ತು ಆನ್-ಲೈನ್ ಜೂಜುಗಳಿಗೆ ಕಾನೂನಾತ್ಮಕ ಅವಕಾಶ ನೀಡಿರುವುದಿಲ್ಲ. |
| ಆ) | ರಾಜ್ಯದಲ್ಲಿ ಆನ್-ಲೈನ್ ಗೇಮ್ಸ್ ನಲ್ಲಿ ಭಾಗವಹಿಸುವುದರಿಂದ ಅನೇಕ ಯುವಕ, ಯುವತಿಯರು ಆರ್ಥಿಕವಾಗಿ ದುರ್ಬಲರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಅಕ್ರಮ ಆನ್‌ಲೈನ್ ಬೆಟ್ಟಿಂಗನಲ್ಲಿ ಭಾಗವಹಿಸಿದವರ ಮೇಲೆ ಪ್ರಕರಣಗಳನ್ನು ದಾಖಲಿಸಿ ತಪ್ಪಿತಸ್ತರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅದೇ ರೀತಿ ಗಾಂಜಾ ಹಾಗೂ ಇತರೆ ಮಾದಕ ವಸ್ತುಗಳನ್ನು ಸೇವಿಸಿ ಯುವಕ, ಯುವತಿಯರು ತಮ್ಮ ಭವಿಷ್ಯವನ್ನು ಕಳೆದುಕೊಳ್ಳುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; | ಹೌದು; ಗಮನಿಸಿದೆ. |
| ಈ) | ಹಾಗಿದ್ದಲ್ಲಿ, ಈ ರೀತಿಯ ಘಟನೆಗಳನ್ನು ತಡೆಗಟ್ಟಿ ಯುವಕ, ಯುವತಿಯರನ್ನು ರಕ್ಷಿಸಲು ಸರ್ಕಾರ ಕೈಗೊಂಡ ಕಠಿಣ ಕ್ರಮಗಳು ಯಾವುವು ? ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಮಾದಕವಸ್ತುಗಳ ಸೇವನೆ, ಮಾರಾಟ, ಸಾಗಾಣಿಕೆ ಕುರಿತಂತೆ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳು ಬಂಧಿಸಲಾಗಿರುವ ಆರೋಪಿಗಳ ವಿವರಗಳು ಈ ಕೆಳಕಂಡಂತಿದೆ:- (table below) |

| ವರ್ಷ | ದಾಖಲಾದ ಪ್ರಕರಣಗಳ ಸಂಖ್ಯೆ | ಅಪರಾಧಿಗಳವಿವರ | |
|---|---|---|---|
| | | ಭಾರತೀಯ | ವಿದೇಶಿಯರು |
| 2023 | 6767 | 6254 | 83 |
| 2024 | 4188 | 3222 | 71 |
| 2025 | 2830 | 1394 | 41 |

ರಾಜ್ಯದಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ಜಪ್ತಿ ಪಡಿಸಿಕೊಂಡ ಮಾದಕ ವಸ್ತುಗಳು, ಅವುಗಳ ಅಂದಾಜು ಮೌಲ್ಯ;

| ವರ್ಷ | ಜಪ್ತಿಸಿಕೊಂಡ ಮಾದಕ ವಸ್ತುಗಳು ಕೆ.ಜಿಗಳಲ್ಲಿ | | ಒಟ್ಟು ಮೌಲ್ಯ ಕೋಟಿಗಳಲ್ಲಿ |
|---|---|---|---|
| | ಗಾಂಜಾ | ಸಿಂಥೆಟಿಕ್ | |
| 2023 | 10660 | 155 | 133.51 |
| 2024 | 5743 | 289 | 165.21 |
| 2025 | 2582 | 330 | 119.43 |

**ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟವನ್ನು ತಡೆಗಟ್ಟಲು ಹಾಗೂ ಮಾದಕ ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಈ ಕೆಳಕಂಡಂತಿದೆ:**

- ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/141/ಪಿಒಪಿ/2025, ದಿನಾಂಕ: 01/08/2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (**Anti Narcotic Task Force**) ಘಟಕವನ್ನು ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರ ನೇತೃತ್ವದಲ್ಲಿ ಸೃಜಿಸಲಾಗಿದೆ.
- ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾ ವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.
- ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿNCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಎನ್‌ಡಿಪಿಎಸ್ ಪ್ರಕರಣಗಳಲ್ಲಿ ಭಾಗಿಯಾಗಿರುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಆರೋಪಿಗಳನ್ನು Foreigners Act-1946, Passport Act-1920 ರ ಅಡಿಯಲ್ಲಿ ನಿಯಮಾನುಸಾರ ಗಡಿಪಾರು ಪ್ರಕ್ರಿಯೆ ಕ್ರಮ ಜರುಗಿಸಲಾಗುತ್ತಿದೆ.
- ಎನ್‌ಡಿಪಿಎಸ್ ಪ್ರಕರಣಗಳಲ್ಲಿ 2022 ರಿಂದ 2025 ಸಾಲಿನ ಜುಲೈವರೆಗೆ 318 ಆರೋಪಿಗಳನ್ನು ಬಂಧಿಸಿ ಸೂಕ್ತ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುತ್ತಿದೆ. ಈ ಅವಧಿಯಲ್ಲಿ 56 ವಿದೇಶಿಯರನ್ನು ಗಡಿಪಾರು ಮಾಡಲಾಗಿದೆ
- PITNDPS-1988ರ ಕಾಯ್ದೆರನ್ವಯ ರಾಜ್ಯದಲ್ಲಿ ಇದುವರೆವಿಗೂ 19 ಆರೋಪಿಗಳ ವಿರುದ್ಧ ನಿಯಾಮಾನುಸಾರ ಬಂಧನ ಕ್ರಮ ಜರುಗಿಸಿ ಮಾನ್ಯ PITNDPS ಸಲಹಾ ಮಂಡಳಿಯ ಮುಂದೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಮಾನ್ಯ ಸಲಹಾ ಮಂಡಳಿಯ ವರದಿಯನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಕರ್ನಾಟಕ ಸರ್ಕಾರವು "ನಶಾ ಮುಕ್ತ ಭಾರತ" ಅಭಿಯಾನದಡಿ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಕುರಿತು ರಾಜ್ಯ ಮತ್ತು ಜಿಲ್ಲಾ ಮಟ್ಟದ ಸಮಿತಿಗಳು ಹಾಗೂ ಇತರ ಇಲಾಖೆಗಳ ಸಹಯೋಗದೊಂದಿಗೆ ಅರಿವು, ನೆರವು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಎಲ್ಲಾ

| | | |
|---|---|---|
| | | ವರ್ಗದ ಜನರಿಗೆ ಸಾಮಾಜಿಕ ಜಾಲತಾಣಗಳಾದ Facebook, Whatsapp, Radio ಮತ್ತು Twitter ಇನ್ನಿತರೆ ಎಲ್ಲಾ ಮಾಧ್ಯಮಗಳ ಮುಖಾಂತರ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿದೆ.<br>➢ Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸರ್ವಾಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ ಮಾದಕವಸ್ತು ಬಳಕೆ, ಸಂಗ್ರಹಣೆ, ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ. ಸದರಿ App ಮುಖಾಂತರ ಸಾರ್ವಜನಿಕರು ನೇರವಾಗಿ ಪೊಲೀಸರಿಗೆ ಮಾಹಿತಿ ನೀಡಬಹುದಾಗಿರುತ್ತದೆ.<br>➢ ಜೂನ್ 26, 2025 ರಂದು "ಡ್ರಗ್ಸ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರೀಯ ದಿನಾಚರಣೆ" ಹಮ್ಮಿಕೊಳ್ಳಲಾಗುತ್ತಿದೆ. ಈ ಕಾರ್ಯ ಕ್ರಮದ ಭಾಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಬೋಧನೆ / ಅರಿವು ಮೂಡಿಸುತ್ತಿದ್ದು, ಈ ಸಂಬಂಧ ದಿನ ಪತ್ರಿಕೆ, ಅಕಾಶವಾಣಿ, ದೂರದರ್ಶನ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ತಿಳುವಳಿಕೆ ನೀಡಲಾಗುತ್ತಿದೆ. ಮಾದಕ ವಸ್ತುಗಳ ಸೇವನೆ ಮತ್ತು ಮಾರಾಟ ವಿರುದ್ಧ ಪ್ರತಿಜ್ಞಾ ವಿಧಿ ಬೋಧಿಸಲಾಗುತ್ತಿದೆ.<br>➢ ಈ ಕಾರ್ಯಕ್ರಮದ ಅಂಗವಾಗಿ ವಿಶೇಷ ಕಾರ್ಯ ಕ್ರಮಗಳನ್ನು ರೂಪಿಸಿ ಈ ಕೆಳಕಂಡಂತೆ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಬೋಧನೆ ನೀಡಲಾಗಿದೆ: |

| ವರ್ಷ | ಶಾಲಾ-ಕಾಲೇಜುಗಳ ಸಂಖ್ಯೆ | ವಿದ್ಯಾರ್ಥಿಗಳ ಸಂಖ್ಯೆ |
|---|---|---|
| 2023 | 2049 | 3,95,253 |
| 2024 | 3602 | 5,50,000 |
| 2025 | 4000 | 6,00,000 |

➢ ಶಾಲಾ-ಕಾಲೇಜುಗಳ ಸುತ್ತ ಮುತ್ತಲಿನ ಪ್ರದೇಶಗಳನ್ನು ಮಾದಕ ದ್ರವ್ಯ ಮುಕ್ತ ಪ್ರದೇಶವನ್ನಾಗಿ ಮಾಡಲು ಡ್ರಗ್ಸ್ ಮಾರಾಟಗಾರರ ಮೇಲೆ ನಿಗಾವಹಿಸಿ ಪ್ರಕರಣ ದಾಖಲಿಸಲಾಗುತ್ತಿದೆ.

➢ ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಗೆ ಸಹ ಪರಿಚಯಿಸಲಾಗಿದೆ.

➢ ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳಲ್ಲಿ "ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ ಸಮಿತಿ" ರಚನೆ ಮಾಡುವ ಕುರಿತು ಕಾಲೇಜು ಮತ್ತು ಶಿಕ್ಷಣ ಇಲಾಖೆಗೆ ಪತ್ರ ಬರೆಯಲಾಗಿರುತ್ತದೆ.

**ಎನ್.ಡಿ.ಪಿ.ಎಸ್ ಕಾಯ್ದೆ-1985ರಡಿ ವಿದೇಶಿ ಪ್ರಜೆಗಳ ಮೇಲೆ ದಾಖಲಿಸಿರುವ ಪ್ರಮುಖ ಪ್ರಕರಣಗಳು**

➢ ದಿನಾಂಕ 13/12/2024 ರಂದು ಸಿಸಿಬಿ ಪೊಲೀಸರು ಕೆ.ಆರ್.ಪುರಂ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರು ನೈಜೀರಿಯಾ ದೇಶದ

| | | |
|---|---|---|
| | | ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿ ಅವರಿಂದ ಸುಮಾರು ರೂ.24.00 ಕೋಟಿ ಬೆಲೆಬಾಳುವ 12.010 ಕೆ.ಜಿ. ತೂಕದ ಎಂ.ಡಿ.ಎಂ ಮಾದಕ ವಸ್ತುವನ್ನು ವಶಪಡಿಸಿಕೊಳ್ಳಲಾಗಿದೆ.<br>➢ ಬೆಂಗಳೂರು ನಗರದ ಸಿ.ಸಿ.ಬಿ ಪೊಲೀಸರು ಅಂತರ ರಾಜ್ಯ ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿ ರೂ.11.44 ಕೋಟಿ ಮೌಲ್ಯದ 1438 ಕೆ.ಜಿ ಗಾಂಜವನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ನೈಜೀರಿಯ ದೇಶದ ಪ್ರಜೆಯನ್ನು ಬಂಧಿಸಿ ಆತನಿಂದ ರೂ. 10.00 ಕೋಟಿ ಮೌಲ್ಯದ ಎಂ.ಡಿ.ಎಂ.ಎ ಮತ್ತು12.450 ಗ್ರಾಂ ಎಮ್.ಎಸ್.ಎಂ ಡ್ರಗ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.<br>➢ ಮಂಗಳೂರು ನಗರದ ಪೊಲೀಸರು ದಿನಾಂಕ: 15/03/2025 ರಂದು ಬೆಂಗಳೂರು ನಗರದ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿದೇಶಿ ಪ್ರಜೆಗಳಿಂದ ರೂ.75.00ಕೋಟಿ ಮೌಲ್ಯದ 37.878 ಕೆ.ಜಿ ಎಮ್.ಎಸ್.ಎಂ ಡ್ರಗ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. |
| | | |

**ಸಂಖ್ಯೆ: ಹೆಚ್‌ಡಿ 380 ಎಸ್‌ಎಸ್‌ಟಿ 2025**

**(ಡಾ: ಜಿ. ಪರಮೇಶ್ವರ)**
**ಗೃಹ ಸಚಿವರು**